Scanned by TapScanner

ಸಂಖ್ಯೆ: ಮು.ಅ.(ಯ)/ತಾ.ಮಂ/ 38 /2021-22, ದಿನಾಂಕ: 05-05-21

4. ಕಡತ ಪರಿಶೀಲನೆ ಹಾಗೂ ಕಾಮಗಾರಿ ಅನುಷ್ಠಾನಗೊಳಿಸುವ ಸಮಯದಲ್ಲಿ ಈ ಕೆಳಕಂಡ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸುವುದು.

- ಮು.ಅ(ಜಾ ಮತ್ತು ಪಿ.ಪಿ.ಇ.ವಿ)/ಪಿಆರ್/18/12-13, ದಿನಾಂಕ: 19-01-2013
- ಪ್ರ.ಅ/ಪಿಆರ್/1040/13-14, ದಿನಾಂಕ: 04-09-2013
- ಆ/ಪ್ರ.ಅ/ಪಿಆರ್/7639/12-13, ದಿನಾಂಕ: 17-10-2012
- ಆ/ಪಿಆರ್/7844/12-13, ದಿನಾಂಕ: 09-01-2013

5. ಮಾನ್ಯ ಆಯುಕ್ತರು ರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/6166/2019-20, ದಿನಾಂಕ: 13-12-2019ರಂತೆ ಸೂಕ್ತ ಕ್ರಮಕೈಗೊಳ್ಳುವುದು.
6. ಪಾಲಿಕೆ ವ್ಯಾಪ್ತಿಯಲ್ಲಿನ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತಾಗಿ ಮಾನ್ಯ ಆಯುಕ್ತರು ರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20, ದಿನಾಂಕ: 05-11-2019ರಲ್ಲಿ ಸೂಚಿಸಿರುವ ಕ್ರಮಗಳನ್ವಯ ನಿಯಮಾನುಸಾರ ಅನುಷ್ಠಾನಗೊಳಿಸುವುದು.
7. ಧೃಢೀಕೃತ ನಿರ್ದೇಶನದ ನಕಾಶೆ ಹಾಗೂ ಕಾಮಗಾರಿ ಸ್ಥಳದಿಂದ ಪ್ರಸ್ತಾಪಿತ ಡಂಪಿಂಗ್ ಯಾರ್ಡ್ ಸ್ಥಳದ ಅನುಮೋದನೆ ಪಡೆಯುವುದು.
8. ರಸ್ತೆ ಇತಿಹಾಸ ಪುಸ್ತಕದಲ್ಲಿ ಕಾಮಗಾರಿಯ ಕೆಲಸಗಳಾದ ಚಿಪ್‌ಕಾರ್ಪೆಟಿಂಗ್, ಜಿಲ್ಲಿರಸ್ತೆ, ಡಾಂಬರೀಕರಣದ ಕೆಲಸವನ್ನು ನಮೂದಿಸುವುದು.
9. ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದು. ಸಾಧ್ಯವಾಗದ ಪಕ್ಷದಲ್ಲಿ ಕಾಲಾವಧಿ ವಿಸ್ತರಣೆಯನ್ನು ಸೂಕ್ತ ಸಮಜಾಯಿಷಿಯೊಂದಿಗೆ/ವಿವರವಾದ ಸಮಂಜಸ ವರದಿ ನೀಡಿ ಕಾಲಾವಧಿ ವಿಸ್ತರಣೆ ಪಡೆಯುವುದು.
10. ಸದರಿ ಕೈಗೊಳ್ಳುವ ಕಾಮಗಾರಿಯು ಪುನರಾವರ್ತನೆ ಅಥವಾ ನಕಲು ಆಗಿರುವುದಿಲ್ಲವೆಂಬ ಬಗ್ಗೆ ಸಂಬಂಧಪಟ್ಟ ಅಭಿಯಂತರರು ಟಿಪ್ಪಣಿ ಹಾಳೆಯಲ್ಲಿ ಹಾಗೂ ಅಂದಾಜು ಪಟ್ಟಿಯಲ್ಲಿ ದೃಢೀಕರಿಸುವುದು.
11. ಮೇಲಾಧಿಕಾರಿಗಳಿಗೆ ಮಾಹಿತಿ ಒದಗಿಸುವಲ್ಲಿ ಮರೆಮಾಚಿದಲ್ಲಿ ಹಾಗೂ ಅಂದಾಜು ಪಟ್ಟಿ ತಯಾರಿಸುವಲ್ಲಿ ಯಾವುದಾದರೂ ಲೋಪದೋಷಗಳು ಕಂಡು ಬಂದಲ್ಲಿ, ಸಂಬಂಧಪಟ್ಟ ವಾರ್ಡಿನ ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು/ಕಾರ್ಯಪಾಲಕ ಅಭಿಯಂತರರನ್ನು ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.
12. ಕಾಮಗಾರಿಯ ಗುಣಮಟ್ಟವನ್ನು ಕಾಯ್ದಿರಿಸುವ ಬಗ್ಗೆ ಸಂಬಂಧಪಟ್ಟ ವಾರ್ಡಿನ ಸಹಾಯಕ ಅಭಿಯಂತರರು/ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು/ಕಾರ್ಯಪಾಲಕ ಅಭಿಯಂತರರನ್ನು ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.

ಮುಖ್ಯ ಅಭಿಯಂತರರು (ಯಲಹಂಕ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಕಾರ್ಯಪಾಲಕ ಅಭಿಯಂತರರು (ಯೋಜನೆ)ವಿಭಾಗ ಯಲಹಂಕ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.
2) ಕಛೇರಿ ಕಡತಕ್ಕೆ.

Scanned by TapScanner